ದಿನಾಂಕಃ **14-12-2022**

ಸಾಕ್ಷಿದಾರರಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು

**ಮುಂದುವರಿದ ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಶ್ರೀ ಆರ್.ಎನ್. ವಕೀಲರಿಂದಃ-**

ನಾನು ಹಾಜರುಪಡಿಸಿದ ಪ್ರಮಾಣ ಪತ್ರವನ್ನು ನನ್ನ ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಲು ಕೋರುತ್ತೇನೆ. ಪ್ರಮಾಣ ಪತ್ರದಲ್ಲಿನ ಎಲ್ಲಾ ಅಂಶಗಳು ಸತ್ಯವಾಗಿವೆ ಮತ್ತು ಅದರಲ್ಲಿ ನನ್ನ ಸಹಿ ಇರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ.

ನಾನು ಹಾಜರುಪಡಿಸಿರುವ ಅಪರಾಧ ಸಂಖ್ಯೆ 9/2020 ರಲ್ಲಿಯ ಪ್ರಥಮ ವರ್ತಮಾನ ವರದಿ, ದೂರು, ಸ್ಥಳ ಪಂಚನಾಮೆ, ಸ್ಥಳ ನಕ್ಷೆ, ಗಾಯದ ಪ್ರಮಾಣ ಪತ್ರ, ಮೋಟಾರು ವಾಹನ ಪರಿಶೀಲನಾ ವರದಿ ಹಾಗೂ ಅಂತಿಮ ವರದಿಗಳ ದೃಢೀಕೃತ ನಕಲುಗಳನ್ನು ಕ್ರಮವಾಗಿ ನಿಪಿ.1 ರಿಂದ 7 ಎಂದು ಗುರುತಿಸಲಾಯಿತು.

ಆಧಾರ್ ಗುರುತಿನ ಚೀಟಿ ಮತ್ತು ಪಾನ್ ಕಾರ್ಡ್ ನಕಲುಗಳನ್ನು ನಿ.ಪಿ.8 ಮತ್ತು 9 ಎಂದು ಗುರುತಿಸಲಾಯಿತು.

**ಮುಂದುವರಿದ ಮುಖ್ಯ ವಿಚಾರಣೆಗೆ ಸಮಯಾವಕಾಶವನ್ನು ಕೋರಿದ್ದರಿಂದ ಮುಂದೂಡಲಾಯಿತು**.

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ತಿ.ನರಸೀಪುರ.